# 61. ಶತಮಾನೋತ್ಸವ ಗ್ರಂಥಾಲಯ ಭವನ

ರಾಜ್ಯದ ಕೇಂದ್ರ ಗ್ರಂಥಾಲಯಕ್ಕೆ ನೂರು ವರ್ಷ ತುಂಬುತ್ತಿರುವ ಹಿನ್ನೆಲೆಯಲ್ಲಿ ಶತಮಾನೋತ್ಸವ ಗ್ರಂಥಾಲಯ ಭವನ ನಿರ್ಮಾಣ ಮಾಡಲಾಗುವುದು ಎಂದು ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವ ಎಸ್.ಸುರೇಶ್ ಕುಮಾರ್ ಹೇಳಿದ್ದಾರೆ.

ಬಿಟಿಎಂ ಬಡಾವಣೆಯ 2ನೇ ಹಂತದಲ್ಲಿ ನೂತನ ಗ್ರಂಥಾಲಯ ಕಟ್ಟಡ ಉದ್ಘಾಟನೆ ನೆರವೇರಿಸಿ ಮಾತನಾಡಿದ ಅವರು ಇತರ ರಾಜ್ಯಗಳಲ್ಲಿರುವ ಗ್ರಂಥಾಲಯ ವ್ಯವಸ್ಥೆಯನ್ನು ಅವಲೋಕಿಸಿ ಎಲ್ಲ ವರ್ಗದ ಓದುಗರಿಗೆ ಅನುಕೂಲವಾಗುವ ರೀತಿಯಲ್ಲಿ ಮಾದರಿ ಶತಮಾನೋತ್ಸವ ಗ್ರಂಥಾಲಯ ಭವನ ನಿರ್ಮಾಣ ಮಾಡಲಾಗುವುದು ಎಂದರು.

ತಾವು ಜೀವನದಲ್ಲಿ ಏನಾದರೂ ಸಾಧನೆ ಮಾಡಿದ್ದರೆ, ಅದರ ಎಲ್ಲ ಶ್ರೇಯಸ್ಸು ಸಾರ್ವಜನಿಕ ಗ್ರಂಥಾಲಯಕ್ಕೆ ಸಲ್ಲಬೇಕು. ತಾವು ಕಾನೂನು ಪದವಿ ವೇಳೆ ವ್ಯಾಸಂಗ ಮಾಡಿದ್ದು ಗ್ರಂಥಾಲಯದಲ್ಲಿಯೇ, ಗ್ರಂಥಾಲಯ ಎಂಬುದು ಶ್ರೀಸಾಮಾನ್ಯನಿಗೆ ವಿವಿ ಇದ್ದಂತೆ ಎಂದರು.

ಶಾಸಕರಾದ ರಾಮಲಿಂಗಾರೆಡ್ಡಿ, ಸೌಮ್ಯರೆಡ್ಡಿ, ಸಂಸದ ತೇಜಸ್ವಿ ಸೂರ್ಯ, ಬಿಬಿಎಂಪಿ ಸದಸ್ಯ ದೇವದಾಸ್, ಗ್ರಂಥಾಲಯ ಇಲಾಖೆ ನಿರ್ದೇಶಕ ಡಾ: ಸತೀಶ್ ಕುಮಾರ್, ಎಸ್.ಹೊಸಮನಿ ಮತ್ತಿತರರು ಉಪಸ್ಥಿತರಿದ್ದರು.

ಇಂದಿನ ಅವಶ್ಯಕತೆಗಳಿಗನುಗುಣವಾಗಿ ಡಿಜಿಟಲ್ ಗ್ರಂಥಾಲಯಗಳನ್ನು ರಾಜ್ಯಾದ್ಯಂತ ಸ್ಥಾಪಿಸಲು ಕ್ರಮ ಕೈಗೊಳ್ಳಲಾಗಿದೆ. ಕಳೆದ ಆರು ತಿಂಗಳಲ್ಲಿ ರಾಜ್ಯದೆಲ್ಲೆಡೆ 272 ಡಿಜಿಟಲ್ ಗ್ರಂಥಾಲಯಗಳು ಕಾರ್ಯಾರಂಭ ಮಾಡಿವೆ ಎಂದು ಸಚಿವರು ತಿಳಿಸಿದರು.

ಆಧಾರ:ವಿಜಯವಾಣಿ, ದಿನಾಂಕ:04.08.2020